ಆರೋಗ್ಯ ಘಟಕಗಳಲ್ಲಿ ಔಷಧಿ, ಚುಚ್ಚು ಮದ್ದು, ಪೀಠೋಪಕರಣಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಅವುಗಳನ್ನು ಬೇಡಿಕೆಗನುಗುಣವಾಗಿ ಒದಗಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಮತ್ತು ಆ) ಕುಣಿಗಲ್ ಪಟ್ಟಣದಲ್ಲಿರುವ ಸರ್ಕಾರಿ ಸಾರ್ವಜನಿಕ ಆಸ್ಪತ್ರೆ, ತಾಲ್ಲೂಕಿನ ಸಮುದಾಯ ಆರೋಗ್ಯ ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಔಷಧಿ, ಚುಚ್ಚುಮದ್ದು ಮತ್ತು ರಾಸಾಯನಿಕಗಳಿಗಾಗಿ ಪ್ರಸಕ್ತ ಸಾಲಿನಲ್ಲಿ ಒಟ್ಟು ರೂ. 25,65,800/- ಗಳು ಅನುದಾನ ನಿಗದಿಯಾಗಿದ್ದು, ಇದರಲ್ಲಿ ಈವರೆವಿಗೂ ರೂ. 22,21,884/- ಮೌಲ್ಯದ ಔಷಧಿಗಳನ್ನು ಸರಬರಾಜು ಮಾಡಲಾಗಿದೆ. ಉಳಿಕೆ ಅನುದಾನಕ್ಕೆ ಆಯಾ ಸಂಸ್ಥೆಗಳ ಅಗತ್ಯಕ್ಕೆ ಅನುಗುಣವಾಗಿ ಔಷಧಿಗಳನ್ನು ಪಡೆಯಬಹುದಾಗಿರುತ್ತದೆ. ಈ ಬಗ್ಗೆ ಕೊರತೆ ಇರುವುದಿಲ್ಲ.

ಸಾರ್ವಜನಿಕ ಆಸ್ಪತ್ರೆ, ಕುಣಿಗಲ್ ಇಲ್ಲಿಗೆ ಅವಶ್ಯವಿರುವ ಪೀಠೋಪಕರಣಗಳನ್ನು ಸರಬರಾಜು ಮಾಡಲಾಗಿದೆ. ಸದರಿ ತಾಲ್ಲೂಕಿನ ಸಮುದಾಯ ಆರೋಗ್ಯ ಕೇಂದ್ರಗಳು/ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಪೀಠೋಪಕರಣಗಳ ಕೊರತೆ ಇರುವುದು ಗಮನಕ್ಕೆ ಬಂದಿರುವುದಿಲ್ಲ.

ಖಾಲಿ ಇರುವ ವೈದ್ಯರು & ಸಿಬ್ಬಂದಿಗಳು

450 (91) ಶ್ರೀ ರಾಮಸ್ವಾಮಿಗೌಡ ಬಿ.ಬಿ. (ಕುಣಿಗಲ್) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಣಿಗಲ್ ತಾಲ್ಲೂಕಿನಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ಸಮುದಾಯ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯರು ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು;

ಆ) ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಏನು ಕ್ರಮ ಕೈಗೊಂಡಿದೆ?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಕುಣಿಗಲ್ ತಾಲ್ಲೂಕಿನಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ 19 ವೈದ್ಯಾಧಿಕಾರಿಗಳ ಹುದ್ದೆ ಮಂಜೂರಾಗಿದ್ದು, 19 ವೈದ್ಯಾಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಸಮುದಾಯ ಕೇಂದ್ರಗಳಲ್ಲಿ 4 ತಜ್ಞ ವೈದ್ಯರುಗಳು ಹುದ್ದೆ ಮಂಜೂರಾಗಿದ್ದು, ಒಬ್ಬರು ಹಿರಿಯ ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. (ಜನರಲ್ ಮೆಡಿಸಿನ್, ಸ್ತ್ರೀರೋಗ, ಮಕ್ಕಳ ತಜ್ಞರ ಹುದ್ದೆಗಳು ಖಾಲಿ ಇವೆ).

ಮುಂದುವರೆದು, ಈ ತಾಲ್ಲೂಕಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಿಗೆ ಒಟ್ಟು 242 ವಿವಿಧ ವೃಂದದ ಸಿಬ್ಬಂದಿ ಹುದ್ದೆಗಳು ಮಂಜೂರಾಗಿದ್ದು, ಆ ಪೈಕಿ 149 ಕಾರ್ಯನಿರ್ವಹಿಸುತ್ತಿದ್ದಾರೆ. 93 ಹುದ್ದೆಗಳು ಖಾಲಿ ಇವೆ.

ಆ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಕುರಿತಂತೆ ಸರ್ಕಾರ ಕೈಗೊಂಡಿರುವ ಕ್ರಮಗಳ ವಿವರಗಳನ್ನು ಅನುಬಂಧ–1 ರಲ್ಲಿ ನೀಡಲಾಗಿದೆ.

ಅನುಬಂಧ – 1

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ವಿವಿಧ ವೃಂದಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ತೆಗೆದುಕೊಂಡಿರುವ/ತೆಗೆದುಕೊಳ್ಳಲಿರುವ ಕ್ರಮಗಳ ವಿವರ

1. ತಜ್ಞ ವೈದ್ಯರ ಖಾಲಿ ಹುದ್ದೆಗಳನ್ನು 2010 ರಲ್ಲಿ ಸ್ನಾತಕೋತ್ತರ ವ್ಯಾಸಂಗ ಮುಗಿಸಿ ಬರುವ ವೈದ್ಯರಿಗೆ ಸ್ಥಳನಿಯುಕ್ತಿ ಮಾಡುವ ಮೂಲಕ ಆದ್ಯತಾನುಸಾರ ಭರ್ತಿ ಮಾಡಲು ಕ್ರಮವಹಿಸಲಾಗುವುದು.
2. (1) ಮಕ್ಕಳ ತಜ್ಞರು, (2) ಅರವಳಿಕೆ ತಜ್ಞರು ಹಾಗೂ (3) ಸ್ತ್ರೀರೋಗ ತಜ್ಞರುಗಳ ಕೊರತೆಯನ್ನು ನೀಗಿಸಲು ಮಾಸಿಕ ಗರಿಷ್ಟ ರೂ. 50,000 ರವರೆಗೆ ಗೌರವಧನ ನೀಡಿ ನೇಮಕ ಮಾಡಿಕೊಳ್ಳಲು ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನದ (ಎನ್.ಆರ್. ಹೆಚ್.ಎಂ.) ಅಡಿ ಅವಕಾಶ ಕಲ್ಪಿಸಲಾಗಿದೆ. ಹಾಗೂ ಇದೇ ಯೋಜನೆಯಡಿ ಪ್ರಕರಣವಾರು ಆಧಾರದ ಮೇಲೆ ಪ್ರತೀ

ಪ್ರಕರಣವೊಂದಕ್ಕೆ (1) ಮಕ್ಕಳ ತಜ್ಞರಿಗೆ ರೂ.500, (2) ಅರೆವಳಿಕೆ ತಜ್ಞರಿಗೆ ರೂ.1,000 ಹಾಗೂ (3) ಸ್ತ್ರೀರೋಗ ತಜ್ಞರಿಗೆ ರೂ.1,500 ರಂತೆ ನೀಡಲು ಸಹ ಅವಕಾಶ ಕಲ್ಪಿಸಲಾಗಿದೆ.

3. ಕರ್ನಾಟಕ ಆರೋಗ್ಯ ಪದ್ಧತಿ ಅಭಿವೃದ್ಧಿ ಸುಧಾರಣಾ ಯೋಜನೆ (ಕೆ.ಹೆಚ್.ಎಸ್.ಡಿ.ಆರ್.ಪಿ) ರ ಅಡಿಯಲ್ಲಿ ಮೇಲಿನ ಕ್ರಮ ಸಂಖ್ಯೆ:2 ರಲ್ಲಿ ತಿಳಿಸಿರುವ 3 ತಜ್ಞತೆಗಳನ್ನು ಹೊರತುಪಡಿಸಿ ಉಳಿದ ತಜ್ಞತೆಯಲ್ಲಿ ಮಾಸಿಕ ರೂ.5,000 ಗೌರವ ಧನ ನೀಡಿ ರಿಟೈನರ್ ಶಿಪ್ ಆಧಾರದ ಮೇಲೆ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಇದೇ ಕೆ.ಹೆಚ್.ಎಸ್.ಆರ್.ಡಿ.ಪಿ. ಯೋಜನೆಯಡಿ, ಸದರಿ ತಜ್ಞರು ಹೊರರೋಗಿ ವಿಭಾಗದಲ್ಲಿ ಕಾರ್ಯನಿರ್ವಹಿಸಿದ್ದಲ್ಲಿ ದಿನವೊಂದಕ್ಕೆ ರೂ.1,000 ದಂತೆ ಗೌರವ ಧನ ನೀಡಲು ಅವಕಾಶ ಕಲ್ಪಿಸಲಾಗಿದೆ. ಆದರೆ ವಾರಕ್ಕೆ ಎರಡು ದಿನಕ್ಕೆ ಮಾತ್ರ ಅಂತಹ ಸೇವೆಯನ್ನು ಪಡೆಯಲು ಮಿತಿಗೊಳಿಸಲಾಗಿದೆ.

4. ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು ಈ ಮೂಲಕ ಸ್ತ್ರೀ ರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.

5. ವಿಶೇಷ ನೇರ ನೇಮಕಾತಿ ಸಮಿತಿಯ ಮುಖಾಂತರ 5021 ಅರೆವೈದ್ಯಕೀಯ ಹುದ್ದೆಗಳನ್ನು ನೇಮಕಾತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ. ಅದು ಪೂರ್ಣಗೊಂಡ ನಂತರ ಆದ್ಯತಾನುಸಾರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗುವುದು.

6. ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ 562 ವೈದ್ಯರ ಹಾಗೂ 224 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗಿದೆ.

7. ಪ್ರಸ್ತುತ ಗ್ರೂಪ್–ಡಿ ನೌಕರರ ವೃಂದದಲ್ಲಿ ನೇಮಕಾತಿ ಮಾಡಲು ನಿಷೇಧವಿದ್ದು, ಅವಶ್ಯವಿರುವೆಡೆ ಬಾಹ್ಯ ಮೂಲಗಳಿಂದ ಸೇವೆ ಪಡೆದು ನಿರ್ವಹಿಸಲು ಕ್ರಮವಹಿಸಲಾಗಿದೆ.